# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 53 |
| ಸದಸ್ಯರ ಹೆಸರು | ಶ್ರೀ ಯು.ಬಿ ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 07-12-2020 |
| ಉತ್ತರಿಸಬೇಕಾದ ಸಚಿವರು | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು |

| ಪ್ರಶ್ನೆ | ಉತ್ತರ |
|---|---|
| **ಅ)** ಕೋವಿಡ್ ಹಿನ್ನೆಲೆಯಲ್ಲಿ, ರಾಜ್ಯದ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳು ಆಫ್‌ಲೈನ್‌ನಲ್ಲಿ ಕಾರ್ಯನಿರ್ವಹಿಸದೇ ಇದ್ದರೂ ಪೋಷಕರಿಂದ ಪ್ರತಿ ವರ್ಷದಂತೆ ಶಿಕ್ಷಣ ಶುಲ್ಕವನ್ನು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, |
| **ಆ)** ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಶಿಕ್ಷಣ ಶುಲ್ಕವನ್ನು ಅರ್ಧದಷ್ಟು ಕಡಿತಗೊಳಿಸುವ ಬಗ್ಗೆ ಕೈಗೊಂಡ ಕ್ರಮಗಳೇನು? | ಆಯುಕ್ತರು, ಸಾ.ಶಿ.ಇ ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ: ಸಿ7(2)ಪ್ರಾಶಿಅ.ಶುಲ್ಕ.30:2020-21, ದಿನಾಂಕ:05-09-2020ರಲ್ಲಿ ಖಾಸಗಿ ಅನುದಾನ ರಹಿತ ಶಾಲೆಗಳು ಮೊದಲನೇ ಕಂತಿನ ಅಧಿಕೃತ ಶುಲ್ಕವನ್ನು ಮಾತ್ರ ಶಾಲಾ ಪ್ರವೇಶಾತಿಗಾಗಿ ಪೋಷಕರಿಂದ ಪಡೆಯಲು ಅನುಮತಿ ನೀಡಲಾಗಿದೆ. ಆದರೆ, ಯಾವುದೇ ಕಾರಣಕ್ಕೂ ಕಳೆದ ವರ್ಷ ಪಡೆದ ಶುಲ್ಕಕ್ಕಿಂತ ಪ್ರಸ್ತುತ ವರ್ಷದ ಶುಲ್ಕವನ್ನು ಹೆಚ್ಚಿಸದಂತೆ ಸೂಚಿಸಿದೆ. ಕೋವಿಡ್-19 ಹಿನ್ನೆಲೆಯಲ್ಲಿ ಪೋಷಕರು ಆರ್ಥಿಕ ಸಂಕಷ್ಟದಲ್ಲಿರುವುದರಿಂದ ಪ್ರಸ್ತುತ ಶುಲ್ಕವನ್ನು ಹಿಂದಿನ ಸಾಲಿನ ಶುಲ್ಕಕ್ಕಿಂತ ಕಡಿಮೆ ಮಾಡಲು ಆಡಳಿತ ಮಂಡಳಿಗಳು ಮುಕ್ತವಾಗಿರುತ್ತವೆ. |

**ಇಡಿ 149 ಪಿಜಿಸಿ 2020**

[ ಎಸ್.ಸುರೇಶ್ ಕುಮಾರ್]
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.